# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 791 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 20.12.2021 |

| | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರನ್ನು 2021-22ನೇ ಸಾಲಿಗೆ ಮುಂದುವರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು) | ಕೋವಿಡ್-19 ಸಾಂಕ್ರಾಮಿಕ ರೋಗದ ಪ್ರಸರಣೆಯಿಂದ ಉಂಟಾಗಿರುವ ವಿಷಮ ಪರಿಸ್ಥಿತಿಯ ಹಿನ್ನೆಲೆಯಲ್ಲಿ, ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳಲ್ಲಿ 2020-21ನೇ ಸಾಲಿನಲ್ಲಿ ಕಾರ್ಯನಿರ್ವಹಿಸಿದ ಅತಿಥಿ ಉಪನ್ಯಾಸಕರುಗಳನ್ನು ಒಂದು ದಿನದ ಮಟ್ಟಿಗೆ ಬಿಡುಗಡೆಗೊಳಿಸಿ, 2021-22ನೇ ಶೈಕ್ಷಣಿಕ ಸಾಲಿಗೂ ಮುಂದುವರೆಸಲು ಸರ್ಕಾರದ ಪತ್ರ ಸಂಖ್ಯೆ: 269 ಯುಎನ್ಇ 2020, ದಿನಾಂಕ: 22.10.2021ರ ಪತ್ರದಲ್ಲಿ ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳಿಗೆ ನಿರ್ದೇಶನ ನೀಡಲಾಗಿರುತ್ತದೆ.<br><br>ಅದರಂತೆ, ಮಂಡ್ಯ ವಿಶ್ವವಿದ್ಯಾಲಯವನ್ನು ಹೊರತುಪಡಿಸಿ ಉಳಿದ ವಿಶ್ವವಿದ್ಯಾನಿಲಯಗಳ ಅತಿಥಿ ಉಪನ್ಯಾಸಕರು ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ. |
| (ಆ) | ಎಲ್ಲಾ ವಿಶ್ವವಿದ್ಯಾನಿಲಯಗಳ ಅತಿಥಿ ಉಪನ್ಯಾಸಕರು ಕರ್ತವ್ಯಕ್ಕೆ ವರದಿ ಮಾಡಿಕೊಂಡಿದ್ದಾರೆಯೇ; (ಮಾಹಿತಿ ನೀಡುವುದು) | |
| (ಇ) | ಮಂಡ್ಯ ವಿಶ್ವವಿದ್ಯಾನಿಲಯದಲ್ಲಿನ ಅತಿಥಿ ಉಪನ್ಯಾಸಕರನ್ನು ಕರ್ತವ್ಯಕ್ಕೆ ವರದಿ ಮಾಡಿಕೊಂಡಿಲ್ಲದಿರುವುದಕ್ಕೆ ಕಾರಣಗಳೇನು; | ಮಂಡ್ಯ ವಿಶ್ವವಿದ್ಯಾನಿಲಯದಲ್ಲಿನ ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಹಿಂದಿನ ವಿಶೇಷಾಧಿಕಾರಿಗಳು ನಿಯಮಗಳನ್ನು ಪಾಲಿಸಿರುವುದಿಲ್ಲವೆಂಬ ಕಾರಣದಿಂದ ಅವರುಗಳನ್ನು 2021-22ನೇ ಶೈಕ್ಷಣಿಕ ಸಾಲಿಗೆ ಮುಂದುವರೆಸಿರುವುದಿಲ್ಲ. |
| (ಈ) | ಈ ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕರಿಗೆ 2 ವರ್ಷಗಳಿಂದ ವೇತನ ನೀಡದಿರಲು ಕಾರಣಗಳೇನು; | 2019-20ನೇ ಸಾಲಿನಲ್ಲಿ ನೇಮಕಗೊಂಡಿದ್ದ ಅತಿಥಿ ಉಪನ್ಯಾಸಕರುಗಳಿಗೆ ಸೆಪ್ಟೆಂಬರ್-2019 ರಿಂದ ಸೆಪ್ಟೆಂಬರ್-2021 ರವರೆಗೆ ವೇತನವನ್ನು ಪಾವತಿಸಲಾಗಿರುತ್ತದೆ. |
| (ಉ) | ಮಂಡ್ಯ ವಿಶ್ವವಿದ್ಯಾನಿಲಯ ಕುಲಸಚಿವರನ್ನು ನೇಮಕ ಮಾಡುವಾಗ ಯಾವ ಮಾನದಂಡ ಅನುಸರಿಸಲಾಗಿದೆ ಯುಜಿಸಿ ಮಾನದಂಡಗಳನ್ನು ಪರಿಗಣಿಸಲಾಗಿದೆಯೇ; (ಮಾಹಿತಿ ನೀಡುವುದು) | ಮಂಡ್ಯ ವಿಶ್ವವಿದ್ಯಾಲಯದಲ್ಲಿ ಆಡಳಿತ ನಿರ್ವಹಣೆ, ಪ್ರವೇಶಾತಿ ಕಾರ್ಯ ಚಟುವಟಿಕೆ, ಪರೀಕ್ಷಾ ಕಾರ್ಯಗಳ ನಿರ್ವಹಣೆಯನ್ನು ನಿರ್ವಹಿಸಲು ಅನುವಾಗುವಂತೆ ಹಂಗಾಮಿಯಾಗಿ ಸೇವಾಹಿರಿತನದ |

| | | |
|---|---|---|
| | | ಆಧಾರದ ಮೇಲೆ ಸರ್ಕಾರದಿಂದ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಸಂಗತ ಉಪಬಂಧಗಳನುಸಾರ ನೇಮಕಾತಿ ಮಾಡುವವರೆಗೆ ಅಥವಾ ಮುಂದಿನ ಆದೇಶದವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಕುಲಸಚಿವರು (ಆಡಳಿತ) ಹುದ್ದೆಗೆ ನೇಮಿಸಲಾಗಿರುತ್ತದೆ. |

ಇಡಿ 350 ಯುಎನ್‌ಇ 2021

(ಡಾ: ಅಶ್ವತ್ಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐಟಿ ಬಿಟಿ, ವಿಜ್ಞಾನ ಮತ್ತು
ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು